**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**
**ಸಿ.ಸಿ. 1612/2019**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.01**

**ದಿನಾಂಕ: 06.03.2025**

**ಪಾಟೀಸವಾಲು ಃ ಆರೋಪಿ ಪರ ವಕೀಲರಿಂದ ಃ**

ನಾನು ಮತ್ತು ಆರೋಪಿ ಒಂದೇ ಏರಿಯಾದಲ್ಲಿ ವಾಸವಾಗಿದ್ದೇವೆ ಎಂದರೆ ಸರಿ. ನಾನು ಭಾರತ್ ಬೀಡಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದೇನೆ. ಈ ವಿಚಾರವನ್ನು ನನ್ನ ಪಿರ್ಯಾದಿಯಲ್ಲಿ ಬರೆಸಿದ್ದೇನೆ. ಅದೇರೀತಿ ಎಷ್ಟು ವರ್ಷದಿಂದ ಕೆಲಸ ಮಾಡುತ್ತಿದ್ದೇನೆ ಎಂದು ಬರೆಸಿಲ್ಲ. ನನಗೆ ಎಷ್ಟು ಆದಾಯ ಇದೆ ಎಂದು ಪಿರ್ಯಾದಿಯಲ್ಲಿ ಬರೆಸಿಲ್ಲ ಎಂದರೆ ಸರಿ. ನನ್ನ ಆದಾಯದ ಮೂಲವನ್ನು ಪಿರ್ಯಾದಿಯಲ್ಲಿ ಬರೆಸಿಲ್ಲ ಎಂದರೆ ಸರಿ. ಪ್ರಸ್ತುತ ಪ್ರಕರಣದ ವ್ಯವಹಾರವನ್ನು ಹೊರತುಪಡಿಸಿ ಆರೋಪಿ ಇನ್ನೂ 2 ಬಾರಿ ನನ್ನಿಂದ ಹಣ ಪಡೆದಿದ್ದರು. ಈ ಹಿಂದೆ ಎಷ್ಟು ಹಣವನ್ನು ಯಾವ ದಿನಾಂಕದಂದು ಪಡೆದಿದ್ದರು ಎಂದು ಪಿರ್ಯಾದಿಯಲ್ಲಿ ನಮೂದಿಸಿಲ್ಲ ಎಂದರೆ ಸರಿ. ನನ್ನ ಮತ್ತು ಆರೋಪಿಯ ನಡುವೆ ವ್ಯವಹಾರ ಎಲ್ಲಿ, ಯಾವ ದಿನಾಂಕದಂದು ಮತ್ತು ಯಾರ ಸಮಕ್ಷಮ ಆಯಿತು ಎಂದು ಪಿರ್ಯಾದಿಯಲ್ಲಿ ಬರೆಸಿಲ್ಲ ಎಂದರೆ ಸರಿಯಲ್ಲ. ನಾನು ನ್ಯಾಯಾಲಯಕ್ಕೆ ಸಾಕ್ಷ್ಯ ನೀಡುವ ಮುನ್ನ ನನ್ನ ಪಿರ್ಯಾದಿಯನ್ನು ಓದಿ ತಿಳಿದುಕೊಂಡಿದ್ದೇನೆ ಎಂದರೆ ಸರಿ. ನನ್ನ ಬಳಿ 1,80,000/- ರೂ ಇದ್ದ ಬಗ್ಗೆ ಯಾವುದೇ ದಾಖಲೆಯನ್ನು ಸಲ್ಲಿಸಿಲ್ಲ ಎಂದರೆ ಸರಿ. ಸದರಿ ಹಣವನ್ನು ನಾನು ಆರೋಪಿಗೆ ನಗದು ರೂಪದಲ್ಲಿ ನೀಡಿದ್ದೇನೆ ಈ ವಿಚಾರವನ್ನು ಪಿರ್ಯಾದಿಯಲ್ಲಿ ಬರೆಸಿಲ್ಲ. ಅದೇ ರೀತಿ ಸದರಿ ವಿಚಾರವನ್ನು ನನ್ನ ನೋಟಿಸ್ ಮತ್ತು ಮುಖ್ಯ ವಿಚಾರಣೆಯಲ್ಲಿ ಎಲ್ಲಿಯೂ ಸಹ ಬರೆಸಿಲ್ಲ ಎಂದರೆ ಸರಿ. ಆರೋಪಿಗೆ ಹಣ ನೀಡಿದ ಬಗ್ಗೆ ನನ್ನ ಅವರ ನಡುವೆ ಯಾವುದೇ ಬರವಣಿಗೆ ಆಗಿಲ್ಲ ಎಂದರೆ ಸರಿ. ಸಾಕ್ಷಿಯು ಸ್ನೇಹದ ಆಧಾರದ ಮೇಲೆ ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ.

ಸಾಕ್ಷಿಯ ಮುಂದುವರೆದ ಪಾಟೀಸವಾಲಿಗಾಗಿ ಕಾಲವಕಾಶ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ.